ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಖಾಸಗಿ ಶಾಲೆಗಳು ಪೂರ್ಣ ಪ್ರಮಾಣದ ಫೀಸ್ ತೆಗೆದುಕೊಂಡಿರುವ ಬಗ್ಗೆ

ಶ್ರೀ ಎನ್.ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :-

640(637) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) 2020-2021 ರ ಶೈಕ್ಷಣಿಕ ವರ್ಷದಲ್ಲಿ ಶಾಲೆ ಪ್ರಾರಂಭವಾಗದಿದ್ದರೂ ಖಾಸಗಿ ಶಾಲೆಗಳು ಪೂರ್ಣ ಪ್ರಮಾಣದ ಫೀಸುಗಳನ್ನು ತೆಗೆದುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಆ) ಈಗಾಗಲೇ ಪೂರ್ಣ ಪ್ರಮಾಣದ ಫೀಸುಗಳನ್ನು ಕಟ್ಟಿರುವ ಪೋಷಕರಿಗೆ ಸರ್ಕಾರ ಯಾವ ರೀತಿಯಲ್ಲಿ ಸಹಾಯ ಮಾಡುತ್ತದೆ; ಈ ಶೈಕ್ಷಣಿಕ ವರ್ಷದಲ್ಲಿ ಪೂರ್ಣ ಫೀಸು ಪಾವತಿಸಿದ ಪೋಷಕರಿಗೆ ಮುಂದಿನ ಶೈಕ್ಷಣಿಕ ವರ್ಷದಲ್ಲಿ ರಿಯಾಯಿತಿ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ; ಈ ಕುರಿತು ಸರ್ಕಾರದ ನಿಲುವೇನು;

(ಇ) ಪೂರ್ಣ ಪ್ರಮಾಣದ ಫೀಸು ಕಟ್ಟಲು ಒತ್ತಾಯಿಸುವ ಶಾಲೆಗಳ ಮಾನ್ಯತೆ ರದ್ದುಪಡಿಸುವ ಬಗ್ಗೆ ಸರ್ಕಾರ ಯಾವ ರೀತಿಯ ಕ್ರಮ ಕೈಗೊಂಡಿದೆ?